# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002

***ಪತ್ರಿಕಾ ಪ್ರಕಟಣೆ*** **ದಿನಾಂಕ: 06.07.2011**

ನಗರದಲ್ಲಿ ಖಾಲಿ ನಿವೇಶನಗಳ ನಿರ್ವಹಣೆ ಒಂದು ದೊಡ್ಡ ಸಮಸ್ಯೆಯಾಗಿದೆ. ನಾಗರಿಕರು ನೆಮ್ಮದಿಯಿಂದ ಬದುಕಲಿಕ್ಕೆ ಆಗದ ರೀತಿಯಲ್ಲಿ ಸಮಸ್ಯೆಗಳು ಉದ್ಭವಗಳಾಗುತ್ತಿವೆ. ಖಾಲಿ ನಿವೇಶನದ ಮಾಲೀಕರು ನೆರೆಹೊರೆಯವರ ಬಗ್ಗೆ ಯೋಚಿಸದೇ ನಾಗರಿಕ ಪ್ರಜ್ಞೆಯನ್ನು ಮರೆತು ಕೇವಲ ವ್ಯಾಪಾರ ಮನೋಭಾವನೆಯಿಂದ ಕಟ್ಟಡ ನಿರ್ಮಾಣ ಮಾಡದೇ ಹಾಗೆ ಮುಂದುವರಿಸಿಕೊಂಡು ಹೋಗುತ್ತಾರೆ. ಇದರಿಂದ ಸುತ್ತಮುತ್ತಲು ವಾಸಿಸುವ ಜನಕ್ಕೆ ತುಂಬಾ ತೊಂದರೆ ಉಂಟಾಗುತ್ತಿದೆ. ಇದೇ ರೀತಿ ಮುಂದುವರೆದರೆ ಖಾಲಿ ನಿವೇಶನಗಳ ಮಾಲೀಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಪಾಲಿಕೆಯು ಗಂಭೀರವಾಗಿ ಚಿಂತನೆ ನಡೆಸುತ್ತಿದೆ ಹಾಗೂ ಈ ಖಾಲಿ ನಿವೇಶನಗಳ ಸಮಸ್ಯೆಗಳ ಕುರಿತು ಮುಂದಿನ ಪಾಲಿಕೆಯ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸುತ್ತೇವೆಂದು ಆಯುಕ್ತರು ಉತ್ತರಹಳ್ಳಿಯಲ್ಲಿ ನಡೆದ ಸಾರ್ವಜನಿಕ ಕುಂದುಕೊರತೆ ಸಭೆಯಲ್ಲಿ ತಿಳಿಸಿದರು.

ಪಾಲಿಕೆ ಆಯುಕ್ತರು ಇಂದು ಬೊಮ್ಮನಹಳ್ಳಿ ಮತ್ತು ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರಗಳ ವಾರ್ಡ್ ನಂ.187 ಪುಟ್ಟೇನಹಳ್ಳಿ, ವಾರ್ಡ್-195 ಕೋಣನಕುಂಟೆ, ವಾರ್ಡ್-197 ವಸಂತಪುರ ವಾರ್ಡ್‌ಗಳಲ್ಲಿ ಹಮ್ಮಿಕೊಳ್ಳಲಾದ ತೀವ್ರ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸಿ, ಪರಿಶೀಲನೆ ನಡೆಸಿದರು.

ತದನಂತರ ವಸಂತಪುರ ವಾರ್ಡ್‌ನಲ್ಲಿ ಹಮ್ಮಿಕೊಳ್ಳಲಾದ ಸಾರ್ವಜನಿಕ ಕುಂದುಕೊರತೆ ಸಭೆಯಲ್ಲಿ ಭಾಗವಹಿಸಿ, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿದರು.

ರಾಮಾಂಜಿನೇಯ ನಗರ, ನಾರಾಯಣನಗರ, ಗೌರವನಗರ, ಆರ್.ಬಿ.ಐ. ಬಡಾವಣೆ, ಸಿಂಗಪೂರ್, ವಾಜರಹಳ್ಳಿ ಬಡಾವಣೆಗಳ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಕುಂದುಕೊರತೆ ಸಭೆಯಲ್ಲಿ ಮಾತನಾಡಿ, ನಮ್ಮ ಬಡಾವಣೆಗಳಲ್ಲಿ ರಸ್ತೆ, ಉದ್ಯಾನವನಗಳ ಮತ್ತು ಬೀದಿ ದೀಪಗಳ ನಿರ್ವಹಣೆ ಸರಿಯಾಗಿ ಆಗುತ್ತಿದೆ. ನಮ್ಮಲ್ಲಿ ಅಂತಹ ದೊಡ್ಡ ಸಮಸ್ಯೆಗಳು ಇಲ್ಲ. ಆದರೆ, ಕೆಲವು ಸಣ್ಣಪುಟ್ಟ ಸಮಸ್ಯೆಗಳು ಇದ್ದು, ಅವುಗಳನ್ನು ನಿವಾರಣೆ ಮಾಡಿಕೊಡಬೇಕು ಹಾಗೂ ಬೀದಿ ನಾಯಿಗಳು ಮತ್ತು ಖಾಲಿ ನಿವೇಶನಗಳ ಸಮಸ್ಯೆ ಹೆಚ್ಚಾಗಿದೆ. ಇವೆರಡು ಸಮಸ್ಯೆಗಳ ಬಗ್ಗೆ ಹೆಚ್ಚಿನ ಗಮನಹರಿಸಿ, ಖಾಲಿ ನಿವೇಶನಗಳ ಸ್ವಚ್ಛತೆಗಾಗಿ ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಮನವಿ ಸಲ್ಲಿಸಿದರು.

ಆರ್.ಬಿ.ಐ. ಬಡಾವಣೆಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಶ್ರೀ ಹೆಬ್ಬಾರ್ ರವರು ಮಾತನಾಡಿ, ಈ ಖಾಲಿ ನಿವೇಶನ ಸಮಸ್ಯೆ ಬಗೆಹರಿಸಲಿಕ್ಕೆ ಪಾಲಿಕೆಯೊಂದಿಗೆ ಸಾರ್ವಜನಿಕರು ಕೂಡಾ ಕೈಜೋಡಿಸಬೇಕು. ಖಾಲಿ ನಿವೇಶನಗಳ ಮಾಲೀಕರನ್ನು ಪತ್ತೆ ಹಚ್ಚಿ ಅವರ ಮೇಲೆ ಒತ್ತಡ ತಂದು, ಆಗಾಗ್ಗೆ ಆ ನಿವೇಶನಗಳ ಸ್ವಚ್ಛಗೊಳಿಸಬೇಕು. ಅದಾಗದ ಪಕ್ಷದಲ್ಲಿ ಪಾಲಿಕೆಯ ಅಧಿಕಾರಿಗಳಿಗೆ ಮಾಹಿತಿ ನೀಡಿ, ನೋಟೀಸ್ ಜಾರಿ ಮಾಡಲು ಕ್ರಮ ಕೈಗೊಳ್ಳಬೇಕೆಂದು ಆಯುಕ್ತರಲ್ಲಿ ಕೋರಿದರು.

ಖಾತಾ ನೋಂದಣಿ, ಬೀದಿ ನಾಯಿ ಮತ್ತು ಹಂದಿಗಳ ಹಾವಳಿ, ಮುಂತಾದ ಸಮಸ್ಯೆಗಳಿಗೆ ಸ್ಪಂಧಿಸಿದ ಆಯುಕ್ತರು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚನೆ ನೀಡಿ, 24 ಗಂಟೆಗಳ ಒಳಗೆ ಕ್ರಮ ಕೈಗೊಂಡು ವರದಿ ನೀಡಲು ಸೂಚಿಸಿದರು. ವಸಂತಪುರದಲ್ಲಿದ್ದ ಪಾಲಿಕೆಯ ಜಮೀನನ್ನು ಒತ್ತುವರಿಯಾಗದಂತೆ ಕ್ರಮ ಕೈಗೊಳ್ಳಲು ಕೂಡಲೇ ಅದರ ಸುತ್ತಮುತ್ತಲು ತಂತಿ ಬೇಲಿ ಅಳವಡಿಸಲು 50.00 ಲಕ್ಷ ರೂ.ಗಳಿಗೆ ಮಂಜೂರಾತಿ ನೀಡಿದರು. ಖಾತಾ ನೋಂದಣಿ ಮತ್ತು ಆಸ್ತಿ ತೆರಿಗೆ ಸಂಗ್ರಹಿಸಲು ನಾಳೆಯಿಂದ ಕಂದಾಯ ಇಲಾಖೆಯ ಅಧಿಕಾರಿಗಳಿಂದ ಬಡಾವಣೆಗಳಲ್ಲಿ ಕ್ಯಾಂಪ್‌ಗಳನ್ನು ಮಾಡಿ, ಆಸ್ತಿ ತೆರಿಗೆ ಪಾವತಿಸುವವರಿಗೆ ಅನುಕೂಲ ಮಾಡಿಕೊಡಲು ತಿಳಿಸಿದರು.

ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಎಂ. ಕೃಷ್ಣಪ್ಪ ರವರು ಮಾತನಾಡಿ, ಈ ಹೊಸ ಪ್ರದೇಶಗಳಲ್ಲಿ ಸಮಸ್ಯೆಗಳು ನಿರಂತರವಾಗಿ ಉದ್ಭವವಾಗುತ್ತಿರುತ್ತವೆ. ಅವುಗಳಿಗೆ ಸ್ಪಂಧಿಸಿ, ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಹೊಸ ಪ್ರದೇಶಗಳಲ್ಲಿ ರಸ್ತೆ ಡಾಂಬರೀಕರಣ ಮಾಡಬೇಕಾಗಿದೆ. ಆಯುಕ್ತರು ಈ ಪ್ರದೇಶದ ಅಭಿವೃದ್ಧಿಗಾಗಿ ಸಾಕಷ್ಟು ಯೋಜನೆಗಳಿಗೆ ಅನುಮೋದನೆ ನೀಡಿದ್ದಾರೆ. ಅವುಗಳ ಕಾಮಗಾರಿಗಳನ್ನು ಶೀಘ್ರದಲ್ಲಿಯೇ ಕಾರ್ಯಗತಗೊಳಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಾಲಿಕೆ ಸದಸ್ಯರುಗಳಾದ ಶ್ರೀಮತಿ ವಿಜಯ ರಮೇಶ್, ಶ್ರೀಮತಿ ಎಸ್. ಶಶಿರೇಖಾ ಜಯರಾಮ್, ಶ್ರೀ ಕೆ. ರಮೇಶ್ ರಾಜು, ಶ್ರೀ ಎಲ್. ರಮೇಶ್ ಮುಂತಾದವರು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 06.07.2011

ಉತ್ತರಹಳ್ಳಿ ಉಪ ವಿಭಾಗ ವ್ಯಾಪ್ತಿಯ ವಾರ್ಡ್ ನಂ.184ರ ಎ.ಜಿ.ಎಸ್. ಬಡಾವಣೆಯ ಉದ್ಯಾನವನದ ಜಾಗವನ್ನು ಸುತ್ತಮುತ್ತಲಿನ ಸಾರ್ವಜನಿಕರು ಒತ್ತುವರಿ ಮಾಡಿಕೊಂಡಿದ್ದು, ದಿನಾಂಕ: 23.06.2011 ರಂದು ಪಾಲಿಕೆಯ ಆಯುಕ್ತರು ತಪಾಸಣೆ ಕೈಗೊಂಡು, ಎ.ಜಿ.ಎಸ್. ಬಡಾವಣೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಉದ್ಯಾನವನದ ಜಾಗವನ್ನು ಸರ್ವೆ ಮಾಡಿಸಿ, ಒತ್ತುವರಿ ಮಾಡಿದ ಜಾಗವನ್ನು ಶೀಘ್ರವಾಗಿ ತೆರವುಗೊಳಿಸಬೇಕೆಂದು ಆದೇಶ ನೀಡಿದ್ದರು.

ಪಾಲಿಕೆಯ ಆಯುಕ್ತರ ಆದೇಶದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಭೂ ಮಾಪಕರಿಂದ ಸರ್ವೆ ಮಾಡಿಸಿದ ಸಂದರ್ಭದಲ್ಲಿ ಒಂದು ಚಿಕ್ಕ ಆರ್.ಸಿ.ಸಿ. ಕಟ್ಟಡ, ಕಾಂಪೌಂಡ್ ಗೋಡೆಗಳನ್ನು ದಿನಾಂಕ: 05.07.2011 ರಂದು ಬೊಮ್ಮನಹಳ್ಳಿ ವಲಯದ ಮುಖ್ಯ ಅಭಿಯಂತರರು, ಉತ್ತರಹಳ್ಳಿ ವಿಭಾಗದ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ವಾರ್ಡ್ ನಂ.184ರ ಸಹಾಯಕ ಅಭಿಯಂತರರ ಸಮ್ಮುಖದಲ್ಲಿ ಬಿ.ಎಂ.ಟಿ.ಎಫ್. ಕಾರ್ಯಪಡೆ ವತಿಯಿಂದ ಸ್ಥಳೀಯ ಪೋಲೀಸ್ ಸಿಬ್ಬಂದಿಯ ಸಹಾಯದಿಂದ ಒತ್ತುವರಿ ಜಾಗವನ್ನು ತೆರವುಗೊಳಿಸಲಾಗಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**